15-7-M
01

**ಶ್ರೀ ಎಂ. ನಾಗರಾಜು, ಮಾನ್ಯ ಶಾಸಕರು, ಕರ್ನಾಟಕ ವಿಧಾನ ಪರಿಷತ್ತು ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾಹಿತಿ**

**ವಿಷಯ: ರಾಜ್ಯದಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಬಗ್ಗೆ.**

**ಉತ್ತರ**

ಬಾಲ್ಯವಿವಾಹ ನಿಷೇಧ ಕಾಯ್ದೆ-2006, ಕೇಂದ್ರದ ಕಾಯ್ದೆಯಾಗಿದ್ದು, ಸದರಿ ಕಾಯ್ದೆಯನ್ನು ರಾಜ್ಯದಲ್ಲಿ ದಿನಾಂಕ:10-01-2007ರಿಂದ ಜಾರಿಗೆ ತರಲಾಗಿದೆ. ಬಾಲ್ಯವಿವಾಹವನ್ನು ತಡೆಯುವ ನಿಟ್ಟಿನಲ್ಲಿ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಜಸ್ಟಿಸ್ ಶಿವರಾಜ್ ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯ ಶಿಫಾರಸ್ಸಿನ ಮೇರೆಗೆ ರಾಜ್ಯದಲ್ಲಿ ಪ್ರತ್ಯೇಕವಾಗಿ ಬಾಲ್ಯವಿವಾಹ ನಿಷೇಧ ಕೋಶವನ್ನು ದಿನಾಂಕ:16-11-2011 ರಂದು ಪ್ರಾರಂಭಿಸಲಾಗಿದೆ.

- ಬಾಲ್ಯ ವಿವಾಹ ನಿಷೇಧ ಕಾಯ್ದೆ 2006ನ್ನು ಕರ್ನಾಟಕದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಬಾಲ್ಯ ವಿವಾಹ ನಿಷೇಧ ಕರ್ನಾಟಕ ನಿಯಾವಳಿಗಳು-2014ನ್ನು ದಿನಾಂಕ: 21.10.2015 ರಿಂದ ಜಾರಿಗೊಳಿಸಲಾಗುತ್ತಿದೆ.

- 2016 ರಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ಕ್ಕೆ ಕರ್ನಾಟಕ ಸರ್ಕಾರವು ತಿದ್ದುಪಡಿ ತಂದಿದ್ದು ಬಾಲ್ಯವಿವಾಹ ನಿಷೇಧ(ಕರ್ನಾಟಕ ತಿದ್ದುಪಡಿ) ಅಧಿನಿಯಮ-2016 ಅನ್ನು ದಿನಾಂಕ:03-03-2018 ರಿಂದ ಜಾರಿಗೆ ಬಂದಿದ್ದು, ತಿದ್ದುಪಡಿ ಕಾಯ್ದೆಯ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ.

    - ದಿನಾಂಕ 03-03-2018 ರಿಂದ ನೆರವೇರಿಸಲಾದ ಪ್ರತಿಯೊಂದು ಬಾಲ್ಯ ವಿವಾಹವು ಪ್ರಾರಂಭದಿಂದಲೇ ಅನೂರ್ಜಿತವಾಗತಕ್ಕದ್ದು.
    - "ಪ್ರತಿಯೊಬ್ಬ ಪೊಲೀಸ್ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ನಡೆದ ಅಪರಾಧದ ಸಂಜ್ಞೇಯತೆಯನ್ನು ಗಮನಿಸಿ ಈ ಅಧಿನಿಯಮದಡಿ, ತಾನಾಗಿಯೇ ಕ್ರಮ ತೆಗೆದುಕೊಳ್ಳತಕ್ಕದ್ದು"
    - ಈ ಕಾಯ್ದೆಯಡಿ ಮಹಿಳೆಯರೂ ಕೂಡ ಜೈಲು ಶಿಕ್ಷೆಗೆ ಅರ್ಹರಾಗಿರುತ್ತಾರೆ.
    - ಈ ತಿದ್ದುಪಡಿ ಪ್ರಕಾರ ಸೆಕ್ಷನ್ 9 ಮತ್ತು 13 ರ ಪ್ರಕಾರ ತಪ್ಪಿತಸ್ಥ ವಯಸ್ಕ ಪತಿ, ತಡೆಯಾಜ್ಞೆ ಉಲ್ಲಂಘಿಸಿದವರು ಕನಿಷ್ಟ ಒಂದು ವರ್ಷ ಆದರೆ ಎರಡು ವರ್ಷಗಳ ವರೆಗೆ ವಿಸ್ತರಿಸಬಹುದಾದ ಕಠಿಣ ಕಾರಾವಾಸದಿಂದ ಅಥವಾ ಒಂದು ಲಕ್ಷ ರೂಪಾಯಿಗಳವರೆಗೆ ಜುಲ್ಮಾನೆ ಅಥವಾ ಇವೆರಡರಿಂದಲೂ ಶಿಕ್ಷೆಗೆ ಗುರಿಯಾಗುವರು.
    - ಈ ತಿದ್ದುಪಡಿ ಪ್ರಕಾರ ಸೆಕ್ಷನ್ 10 & 11ರ ಪ್ರಕಾರ ಬಾಲ್ಯವಿವಾಹ ನಡೆಸಿದ ಮತ್ತು ಉತ್ತೇಜಿಸಿದ ತಪ್ಪಿತಸ್ಥರು ಕನಿಷ್ಠ 1 ವರ್ಷದಿಂದ ಗರಿಷ್ಠ 2 ವರ್ಷಗಳವರೆಗೆ ಕಾರಾವಾಸ ಮತ್ತು 1 ಲಕ್ಷ ರೂ ವರೆಗೆ ದಂಡದ ಶಿಕ್ಷೆಗೆ ಗುರಿಯಾಗುವರು.

➢ **ಕಳೆದ 3 ವರ್ಷಗಳಲ್ಲಿ ನಡೆದ ಬಾಲ್ಯ ವಿವಾಹ ಪ್ರಕರಣಗಳ ವಿವರ.**

| ಕ್ರಂ ಸಂ | ವರ್ಷ | ಸ್ವೀಕರಿಸಿದ ದೂರುಗಳ ಸಂಖ್ಯೆ | ತಡೆದ ಸಂಖ್ಯೆ | ನಡೆದ ಸಂಖ್ಯೆ | ಎಫ್.ಐ.ಆರ್ ದಾಖಲಾದ ಸಂಖ್ಯೆ |
|---|---|---|---|---|---|
| 1 | 2021-22 | 2819 | 2401 | 418 | 389 |
| 2 | 2022-23 | 2522 | 2194 | 328 | 327 |
| 3 | 2023-24 | 2559 | 1840 | 719 | 639 |

➢ **ಬಾಲ್ಯವಿವಾಹ ನಿಷೇಧ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೈಗೊಂಡ ಕ್ರಮಗಳು:**

I. **ಬಾಲ್ಯ ವಿವಾಹ ನಿಷೇಧ ಅಧಿಕಾರಿಗಳ ನೇಮಕಾತಿ:**

- **ಬಾಲ್ಯವಿವಾಹ ನಿಷೇಧ ಕಾಯಿದೆ 2006 ರ ಸೆಕ್ಷನ್16 ರ** ಪ್ರಕಾರ, ವಿವಿಧ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಬುಡಕಟ್ಟು ಕಲ್ಯಾಣ ಇಲಾಖೆ, ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ವಿವಿಧ ಹಂತದ **ಅಧಿಕಾರಿಗಳನ್ನು ಬಾಲ್ಯವಿವಾಹ ನಿಷೇದಾಧಿಕಾರಿಗಳನ್ನಾಗಿ** ನೇಮಿಸಿ ದಿನಾಂಕ:28.05.2018ರಂದು ಅಧಿಸೂಚನೆ ಹೊರಡಿಸಲಾಗಿದ್ದು, ರಾಜ್ಯ, ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟಗಳಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಸೂಚನೆ ಹಾಗೂ ಅಗತ್ಯ ತರಬೇತಿಯನ್ನು ನೀಡಲಾಗಿದೆ.

- ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಇಲಾಖೆಯ ಸಹಾಯಕ ನಿರ್ದೇಶಕರುಗಳನ್ನೂ ಸಹ ಬಾಲ್ಯ ವಿವಾಹ ನಿಷೇಧ ಅಧಿಕಾರಿಗಳನ್ನಾಗಿ ನೇಮಕ ಮಾಡಿ ದಿನಾಂಕ: 30.08.2023ರಂದು ಸೇರ್ಪಡೆ ಆದೇಶ ಹೊರಡಿಸಲಾಗಿದೆ.

II. **ತರಬೇತಿ ಕಾರ್ಯಕ್ರಮಗಳು:**

ಚುನಾಯಿತ ಪ್ರತಿನಿಧಿಗಳು, ಕಲ್ಯಾಣ ಮಂಟಪದ ಮಾಲೀಕರು, ಪ್ರಿಂಟಿಂಗ್ ಪ್ರೆಸ್ ಮಾಲೀಕರು, ಧಾರ್ಮಿಕ ಮುಖಂಡರು, ಸಾಮೂಹಿಕ ವಿವಾಹ ಸಂಘಟಕರಲ್ಲಿ ಬಾಲ್ಯ ವಿವಾಹ ನಿಷೇಧದ ಬಗ್ಗೆ ಜಾಗೃತಿ ಮೂಡಿಸಲು ತರಬೇತಿ ಮತ್ತು ಸಂವೇದನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

## III. ಮಾಹಿತಿ, ಶಿಕ್ಷಣ & ಸಂವಹನ (IEC) ಕಾರ್ಯಕ್ರಮಗಳು:

- ಬಾಲ್ಯ ವಿವಾಹ ನಿಷೇಧದ ಬಗ್ಗೆ ಬಸ್ ಜಾಹೀರಾತು, ಗೋಡೆ ಬರಹಗಳು, ರೇಡಿಯೋ, ಟಿ.ವಿ, ಪೋಸ್ಟರ್‌ಗಳು/ ಶಾಸನಬದ್ಧ ಫಲಕಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಶಾಲೆಗಳಲ್ಲಿ ಹಾಗೂ ಧಾರ್ಮಿಕ ಕೇಂದ್ರಗಳಲ್ಲಿ ಅಳವಡಿಸುವ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ಮತ್ತು ಮಕ್ಕಳ ಸಹಾಯವಾಣಿ-1098 ಕುರಿತು ವ್ಯಾಪಕ ಪ್ರಚಾರ ನೀಡಲು ಕ್ರಮವಹಿಸಲಾಗುತ್ತಿದೆ.
- ಅಂಚೆ ಇಲಾಖೆಯ ಸಹಯೋಗದೊಂದಿಗೆ ರಾಜ್ಯ ಮಟ್ಟದ KARNAPEX- 2024 ರ ಕಾರ್ಯಕ್ರಮದಲ್ಲಿ 'ಬಾಲ್ಯ ವಿವಾಹ ನಿಷೇಧ ಕಾರ್ಯಕ್ರಮ ಅನುಷ್ಠಾನದ' ಕುರಿತು ವಿಶೇಷ ಅಂಚೆ ಲಕೋಟೆಯನ್ನು ಬಿಡುಗಡೆ ಮಾಡಲಾಗಿದೆ.
- ಯುವ ಜನತೆಯಲ್ಲಿ ಬಾಲ್ಯ ವಿವಾಹ ನಿಷೇಧದ ಬಗ್ಗೆ ಜಾಗೃತಿ ಮೂಡಿಸಲು ಯಾದಗಿರಿ, ಬೆಳಗಾವಿ, ತುಮಕೂರು, ಚಾಮರಾಜನಗರ ಜಿಲ್ಲೆಗಳಲ್ಲಿ 'ಯುವಮೇಳ' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

## IV. ಕ್ರಮಬದ್ಧ ಕಾರ್ಯವಿಧಾನ(Standard Operating Procedures(SOP)):

- ಬಾಲ್ಯವಿವಾಹ ನಿಷೇಧ ಕಾಯಿದೆಯ ಸುಗಮ ಮತ್ತು ಪರಿಣಾಮಕಾರಿ ಅನುಷ್ಠಾನಕ್ಕಾಗಿ ಬಾಲ್ಯ ವಿವಾಹ ನಿಷೇಧಾಧಿಕಾರಿಗಳು ತಮ್ಮ ಪಾತ್ರಗಳು ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು Standard Operating Procedure (SOP) ಮಾರ್ಗಸೂಚಿಗಳನ್ನು ಅಭಿವೃದ್ಧಿಪಡಿಸಲಾಗಿದೆ.

- **"ಸ್ಫೂರ್ತಿ"** - "ಹದಿಹರೆಯದ ಬಾಲಕಿಯರ ಸಬಲೀಕರಣ" ಕಾರ್ಯಕ್ರಮವು 12-16 ವರ್ಷದ 1.5 ಲಕ್ಷ ಹದಿಹರೆಯದ ಹೆಣ್ಣುಮಕ್ಕಳಲ್ಲಿ ಪೌಷ್ಟಿಕ ಮಟ್ಟ ಸುಧಾರಣೆ, ಪೋಷಕರ ಸಂಬಂಧ ಸುಧಾರಣೆ, ಶಾಲಾ ಬಿಡುವಿಕೆ ಪ್ರಮಾಣ ಕಡಿಮೆಗೊಳಿಸುವುದು ಮತ್ತು ನಿರ್ಧಾರ ಕೈಗೊಳ್ಳುವಲ್ಲಿ ಸುಧಾರಣೆಯ ಉದ್ದೇಶ ಹೊಂದಿದ್ದು, ಬೆಳಗಾವಿ, ಬಾಗಲಕೋಟೆ, ಕಲ್ಬುರ್ಗಿ, ವಿಜಯಪುರ ಮತ್ತು ರಾಯಚೂರು ಜಿಲ್ಲೆಗಳ 11 ತಾಲ್ಲೂಕುಗಳಲ್ಲಿ "ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್" (ಕೆಹೆಚ್‌ಪಿಟಿ) ಮೂಲಕ ಹಮ್ಮಿಕೊಳ್ಳಲಾಗಿದೆ.

## V. ಬಾಲ್ಯವಿವಾಹ ನಿಷೇಧ ಕಾಯ್ದೆಯ ಅನುಷ್ಠಾನ ಮತ್ತು ಮೇಲ್ವಿಚಾರಣಾ ಸಮಿತಿ:

ಬಾಲ್ಯವಿವಾಹ ನಿಷೇಧ ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕಾಗಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲು ರಾಜ್ಯ, ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿಗಳನ್ನು ರಚಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ರಕ್ಷಣೆಗಾಗಿ ರಾಜ್ಯ ಮಟ್ಟದಲ್ಲಿ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಮತ್ತು ತಾಲೂಕು ಮಟ್ಟದಲ್ಲಿ ತಹಶೀಲ್ದಾರ್ ಇವರು ಈ ಸಮಿತಿಗಳ ಅಧ್ಯಕ್ಷರಾಗಿದ್ದು, ಕಾಲಕಾಲಕ್ಕೆ ಈ ಸಮಿತಿಗಳು ಪುನರಾವಲೋಕನಾ ಸಭೆ ನಡೆಸಿ, ಅಗತ್ಯ ಕಟ್ಟುನಿಟ್ಟಿನ ಕ್ರಮಗಳನ್ನು ಸೂಚಿಸಲಾಗುತ್ತಿದೆ.

VI. **ಬಾಲ್ಯವಿವಾಹಗಳನ್ನು ತಡೆಗಟ್ಟಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು:**

- **ಭಾಗ್ಯಲಕ್ಷ್ಮಿ, ಸುಕನ್ಯಾ ಸಮೃದ್ಧಿ ಯೋಜನೆ** - ಭಾಗ್ಯಲಕ್ಷ್ಮಿ ಯೋಜನೆಯು ಬಿಪಿಎಲ್ ಕುಟುಂಬಗಳಲ್ಲಿ ಹೆಣ್ಣು ಮಗುವಿನ ಜನನವನ್ನು ಉತ್ತೇಜಿಸುವ ಮೂಲಕ ರಾಜ್ಯದಲ್ಲಿ ಲಿಂಗ ಅನುಪಾತವನ್ನು ಸುಧಾರಿಸುವ ಗುರಿಯನ್ನು ಹೊಂದಿರುತ್ತದೆ. ಹೆಣ್ಣು ಭ್ರೂಣ ಹತ್ಯೆ, ಬಾಲ್ಯವಿವಾಹ, ಬಾಲಕಾರ್ಮಿಕ ಮತ್ತು ಮಕ್ಕಳ ಕಳ್ಳಸಾಗಾಣಿಕೆಯಂತಹ ಸಾಮಾಜಿಕ ಅನಿಷ್ಟಗಳನ್ನು ನಿರ್ಮೂಲನೆ ಸಹ ಈ ಯೋಜನೆಯ ಉದ್ದೇಶವಾಗಿರುತ್ತದೆ.
- **ಬೇಟಿ ಬಚಾವೋ ಬೇಟಿ ಪಢಾವೋ ಯೋಜನೆ**:- ಈ ಯೋಜನೆಯು ಲಿಂಗತ್ವ ಆಯ್ಕೆ ತಡೆಗಟ್ಟುವುದು, ಹೆಣ್ಣು ಮಗುವಿನ ಉಳಿವು ಮತ್ತು ರಕ್ಷಣೆ ಮತ್ತು ಹೆಣ್ಣು ಮಗುವಿನ ಶಿಕ್ಷಣವನ್ನು ಉತ್ತೇಜಿಸುವ ಉದ್ದೇಶವನ್ನು ಹೊಂದಿರುತ್ತದೆ. ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದಲ್ಲಿ ಸಾರ್ವಜನಿಕರಿಗೆ ಹಾಗೂ ಪೋಷಕರಿಗೆ ಜಾಗೃತಿ/ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

- **ಬಾಲಕಿಯರ ವಸತಿ ನಿಲಯ** – ಹೆಣ್ಣು ಮಕ್ಕಳ ಶಿಕ್ಷಣವನ್ನು ಪ್ರೋತ್ಸಾಹಿಸಲು ಮತ್ತು ಹಿಂದುಳಿದ ತಾಲ್ಲೂಕು ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಹೆಣ್ಣು ಮಕ್ಕಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಪ್ರಸ್ತುತ ರಾಜ್ಯಾದ್ಯಂತ 32 ಹಾಸ್ಟೆಲ್‌ಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಕಾರ್ಯನಿರ್ವಹಿಸುತ್ತಿವೆ.

VII. ಮಾನ್ಯ ಮುಖ್ಯಮಂತ್ರಿಗಳ ದಿನಾಂಕ:15.04.2024ರ ಟಿಪ್ಪಣಿಯಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ವಿವಿಧ ಭಾಗೀದಾರ ಇಲಾಖೆಗಳು ಸಮನ್ವಯತೆಯಿಂದ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲು ಅಗತ್ಯ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ನೀಡಿರುವ ನಿರ್ದೇಶನದನ್ವಯ, ಇಲಾಖಾವಾರು ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ನಿಗದಿಪಡಿಸಿ ಪ್ರಸ್ತಾವನೆಯನ್ನು ಸಚಿವ ಸಂಪುಟದ ಅನುಮೋದನೆಗೆ ಸಲ್ಲಿಸಲಾಗಿದೆ.

ಬಾಲ್ಯವಿವಾಹದಿಂದ ಹೆಣ್ಣುಮಕ್ಕಳ ಮೇಲಾಗುವ ಸಾಮಾಜಿಕ, ದೈಹಿಕ ಮತ್ತು ಆರ್ಥಿಕ ಅಭದ್ರತೆ ಹಾಗೂ ಸಮಸ್ಯೆಗಳ ನಿವಾರಣೆಗಾಗಿ ಇಲಾಖೆಯು ಹಲವಾರು ಕಾರ್ಯಕ್ರಮಗಳು/ ಯೋಜನೆಗಳನ್ನು ಹಮ್ಮಿಕೊಳ್ಳುವ ಮೂಲಕ ಬಾಲ್ಯವಿವಾಹವನ್ನು ತಡೆಗಟ್ಟಲಾಗುತ್ತಿದೆ.

*******

ಲಕ್ಷ್ಮೀ ಆರ್. ಹೆಬ್ಬಾಳಕರ್
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು
ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರು